ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/46/ರಜೆ/2021-22/ಸೇವಿ-1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:11.03.2022.

## ಸುತ್ತೋಲೆ

**ವಿಷಯ:** ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಭಾರ ಪ್ರಾಂಶುಪಾಲರುಗಳ ರಜೆ ಮಂಜೂರಾತಿಯ ಬಗ್ಗೆ.

**ಉಲ್ಲೇಖ:** ಮಾನ್ಯ ಕಾಲೇಜು ಶಿಕ್ಷಣ ನಿರ್ದೇಶಕರ ಸಮ್ಮುಖದಲ್ಲಿ ಮಹಾಲೇಖಪಾಲರ ಕಛೇರಿಯ ಅಧಿಕಾರಿಗಳೊಂದಿಗೆ ದಿನಾಂಕ:23.02.2022 ರಂದು ನಡೆದ ಸಭೆಯಲ್ಲಿ ಸೂಚಿಸಿರುವಂತೆ.

********

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಭಾರ ಪ್ರಾಂಶುಪಾಲರುಗಳು ದೀರ್ಘವಧಿ ರಜೆಗಳಾದ ಗಳಿಕೆ ರಜೆ, ಅಸಾಧಾರಣಾ ರಜೆ, ಮಾತೃತ್ವ ರಜೆ, ಪಿತೃತ್ವ ರಜೆ, ವ್ಯಾಸಂಗ ರಜೆಗಳ ಮಂಜೂರಾತಿ ಕೋರಿ ಸಲ್ಲಿಸಿರುವ ಅರ್ಜಿಗಳನ್ನು ಹಾಗೂ ಮಂಜೂರಾತಿ ಆದೇಶಗಳನ್ನು ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಂದ ಪಡೆಯದೇ ಕಾಲೇಜಿನಿಂದ ನೇರವಾಗಿ ಮಹಾಲೇಖಪಾಲರ ಕಛೇರಿಗೆ ಸಲ್ಲಿಸುತ್ತಿರುವುದಾಗಿ ಉಲ್ಲೇಖಿತ ಸಭೆಯಲ್ಲಿ ನಡೆದ ಚರ್ಚೆಯಲ್ಲಿ ತಿಳಿಸಿದ್ದು, ಇನ್ನು ಮುಂದೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಭಾರ ಪ್ರಾಂಶುಪಾಲರುಗಳು ತಮ್ಮ ಯಾವುದೇ ದೀರ್ಘವಾದಿ ರಜೆ ಮಂಜೂರಾತಿ ಸಂಬಂಧದಲ್ಲಿ ಅರ್ಜಿಗಳನ್ನು ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರಿಗೆ ಸಲ್ಲಿಸಿ, ಅವರ ಅನುಮೋದನೆ ಪಡೆದು ಅದರಂತೆ ರಜೆ ಮಂಜೂರಾತಿಗೆ ಕ್ರಮವಹಿಸಲು ಸೂಚಿಸಲಾಗಿದೆ.

11/03/2022

**ಮುಖ್ಯ ಆಡಳಿತಾಧಿಕಾರಿಗಳು**
**ಕಾಲೇಜು ಶಿಕ್ಷಣ ಇಲಾಖೆ**

**ಇವರಿಗೆ:**

1. ಮಹಾಲೇಖಪಾಲರು (ಎ&ಇ), ಪಾರ್ಕ್ ಹೌಸ್ ರಸ್ತೆ, ಕರ್ನಾಟಕ, ಬೆಂಗಳೂರು-ಮಾಹಿತಿಗಾಗಿ.
2. ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರ್ಗಿ-ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4. ಮ್ಯಾನೇಜರ್/ಅಧೀಕ್ಷಕರು, ಮಾಹಿತಿ ಮತ್ತು ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಪಡಿಸುವ ಸಂಬಂಧದಲ್ಲಿ ಅಗತ್ಯ ಕ್ರಮಕ್ಕಾಗಿ.
5. ಕಛೇರಿ ಪ್ರತಿ.

46-Leave-2021-22